ಕರ್ನಾಟಕ ಸರ್ಕಾರ

# ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ. ಮಲ್ಲೇಶ್ವರಂ. ಬೆಂಗಳೂರು

*********************************************************************************************

ಸಂಖ್ಯೆ : ಸಿ2/ಗ.ಶಾ/ಎಸ್.ಎಸ್.ಎಲ್.ಸಿ/ಪೂ.ಪ/ಮೌ.ಮಾ.ಆ/01/2020-21 ದಿನಾಂಕ: 22.09.2020

**ಪರೀಕ್ಷಾ ತುರ್ತು**

**:: ಸುತ್ತೋಲೆ ::**

**ವಿಷಯ** : ಸೆಪ್ಟೆಂಬರ್ 2020ರ ಎಸ್.ಎಸ್.ಎಲ್.ಸಿ ಪೂರಕ ಪರೀಕ್ಷೆಯ ಮೌಲ್ಯಮಾಪನ ಕಾರ್ಯದ ಉಪಮುಖ್ಯ ಮೌಲ್ಯಮಾಪಕರು ಹಾಗೂ ಸಹಾಯಕ ಮೌಲ್ಯಮಾಪಕರ ಆದೇಶಗಳನ್ನು ಶಾಲಾ ಲಾಗಿನ್ ಮತ್ತು ಬಿ.ಇ.ಒ ಲಾಗಿನ್‌ನಲ್ಲಿ ಡೌನ್‌ಲೋಡ್ ಮಾಡಿಕೊಳ್ಳುವ ಬಗ್ಗೆ.

*******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಸೆಪ್ಟೆಂಬರ್ 2020ರ ಎಸ್.ಎಸ್.ಎಲ್.ಸಿ ಪೂರಕ ಪರೀಕ್ಷೆಯ ಮೌಲ್ಯಮಾಪನ ಕಾರ್ಯವು ದಿನಾಂಕ 07.10.2020ರಿಂದ ಪ್ರಾರಂಭವಾಗುತ್ತಿದ್ದು, ಈ ಸಂಬಂಧ ರಾಜ್ಯದ ಆಯ್ದ 14 ಜಿಲ್ಲೆಗಳ ಸರ್ಕಾರಿ ಮತ್ತು ಮಾನ್ಯತೆ ಪಡೆದಿರುವ ಖಾಸಗಿ, ಅನುದಾನಿತ ಹಾಗೂ ಅನುದಾನರಹಿತ ಶಾಲೆಗಳ ಮುಖ್ಯ ಶಿಕ್ಷಕರು, ತಮ್ಮ ಶಾಲೆಯಿಂದ ಮೌಲ್ಯಮಾಪನ ಕಾರ್ಯಕ್ಕಾಗಿ ನಿಯೋಜನೆಗೊಂಡಿರುವ ಉಪಮುಖ್ಯ ಮೌಲ್ಯಮಾಪಕರು ಮತ್ತು ಸಹಾಯಕ ಮೌಲ್ಯಮಾಪಕರ ನೇಮಕಾತಿ ಆದೇಶ ಪತ್ರಗಳನ್ನು ದಿನಾಂಕ 25.09.2020ರಿಂದ ಆನ್‌ಲೈನ್‌ನಲ್ಲಿ ಮಂಡಳಿಯ ಜಾಲತಾಣದಲ್ಲಿ ಡೌನ್‌ಲೋಡ್ ಮಾಡಿಕೊಳ್ಳುವ ವ್ಯವಸ್ಥೆ ಮಾಡಲಾಗುವುದು.

ಆಯಾ ಶಾಲೆಯ ಮುಖ್ಯ ಶಿಕ್ಷಕರು ತಮ್ಮ ಶಾಲೆಯಿಂದ ಮೌಲ್ಯಮಾಪನ ಕಾರ್ಯಕ್ಕಾಗಿ ನಿಯೋಜಿಸಿರುವ ಅರ್ಹ **ಶಿಕ್ಷಕರ ನೇಮಕಾತಿ ಆದೇಶ ಪತ್ರ**ಗಳನ್ನು ಪರಿಶೀಲಿಸಿ, ಸಂಬಂಧಿಸಿದ ಶಿಕ್ಷಕರಿಗೆ ವಿತರಣೆ ಮಾಡಿ ಕರ್ತವ್ಯದಿಂದ ಬಿಡುಗಡೆಗೊಳಿಸುವುದು.

ಪ್ರತಿ ಜಿಲ್ಲೆ ಮತ್ತು ಬ್ಲಾಕ್/ತಾಲ್ಲೂಕಿನಲ್ಲಿ ಮೌಲ್ಯಮಾಪನ ಕಾರ್ಯಕ್ಕಾಗಿ ನಿಯೋಜನೆಗೊಂಡಿರುವ ಶಿಕ್ಷಕರ ಮೌಲ್ಯಮಾಪಕರ ಈ ಆದೇಶ ಪತ್ರಗಳನ್ನು ಸಂಬಂಧಿಸಿದ ಬ್ಲಾಕ್/ತಾಲ್ಲೂಕಿನ BEO LOGIN ನಲ್ಲಿಯೂ ಸಹ ನೀಡಿದ್ದು, ಕ್ಷೇತ್ರ ಶಿಕ್ಷಣಾಧಿಕಾರಿಗಳು ಸಂಬಂಧಿಸಿದ ಶಾಲಾ ಮುಖ್ಯ ಶಿಕ್ಷಕರಿಗೆ ವಿತರಿಸಿ ಕಡ್ಡಾಯವಾಗಿ ಎಲ್ಲಾ ಅರ್ಹ ಶಿಕ್ಷಕರು ಮೌಲ್ಯಮಾಪನ ಕಾರ್ಯಕ್ಕೆ ಹಾಜರಾಗಲು ನಿರ್ದೇಶಿಸುವುದು.

ಮುಂದುವರೆದಂತೆ ಜಿಲ್ಲೆಯ EO LOGIN ನಲ್ಲಿಯೂ ಸಹ ಆಯಾ ಜಿಲ್ಲೆಯ ವಿವಿಧ ವಿಷಯಗಳ ಮೌಲ್ಯಮಾಪನ ಕೇಂದ್ರಗಳಿಗೆ ನೇಮಕ ಮಾಡಿರುವ ಮೌಲ್ಯಮಾಪಕರ ಚೆಕ್‌ಲಿಸ್ಟ್ ನೀಡಲಾಗಿದೆ. ಅದರಂತೆ ಆಯಾ ಜಿಲ್ಲೆಯ ಉಪನಿರ್ದೇಶಕರು ಮತ್ತು ಎಸ್.ಎಸ್.ಎಲ್.ಸಿ ನೋಡಲ್ ಅಧಿಕಾರಿಗಳು ಮೌಲ್ಯಮಾಪನ ಕಾರ್ಯದ ಮೇಲ್ವಿಚಾರಣೆ ಹಾಗೂ ಉಸ್ತುವಾರಿ ನಿರ್ವಹಿಸುವುದು.

(ಸುಮಂಗಲ.ವಿ) 22/9

ನಿರ್ದೇಶಕರು (ಪರೀಕ್ಷೆಗಳು)

**ಅಗತ್ಯಕ್ರಮಕ್ಕಾಗಿ ::**

1) ಉಪನಿರ್ದೇಶಕರು (ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ, ಮಂಡ್ಯ, ದಾವಣಗೆರೆ, ಧಾರವಾಡ, ಬೆಳಗಾವಿ, ಕಲ್ಬುರ್ಗಿ, ರಾಮನಗರ, ಮಧುಗಿರಿ, ಶಿವಮೊಗ್ಗ, ಮೈಸೂರು, ಹಾಸನ, ದಕ್ಷಿಣ ಕನ್ನಡ, ಉಡುಪಿ, ವಿಜಯಪುರ, ಬೀದರ್ ಜಿಲ್ಲೆ.
2) ಮಂಡ್ಯ, ದಾವಣಗೆರೆ, ಧಾರವಾಡ, ಬೆಳಗಾವಿ, ಕಲ್ಬುರ್ಗಿ, ರಾಮನಗರ, ಮಧುಗಿರಿ, ಶಿವಮೊಗ್ಗ, ಮೈಸೂರು, ಹಾಸನ, ದಕ್ಷಿಣ ಕನ್ನಡ, ಉಡುಪಿ, ವಿಜಯಪುರ, ಬೀದರ್ ಜಿಲ್ಲೆಯ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ – ಉಪನಿರ್ದೇಶಕರು (ಆಡಳಿತ)ರವರ ಮುಖೇನ
3) ಮಂಡ್ಯ, ದಾವಣಗೆರೆ, ಧಾರವಾಡ, ಬೆಳಗಾವಿ, ಕಲ್ಬುರ್ಗಿ, ರಾಮನಗರ, ಮಧುಗಿರಿ, ಶಿವಮೊಗ್ಗ, ಮೈಸೂರು, ಹಾಸನ, ದಕ್ಷಿಣ ಕನ್ನಡ, ಉಡುಪಿ, ವಿಜಯಪುರ, ಬೀದರ್ ಜಿಲ್ಲೆಯ ಸರ್ಕಾರಿ, ಅನುದಾನಿತ ಹಾಗು ಮಾನ್ಯತೆ ಪಡೆದಿರುವ ಖಾಸಗಿ ಅನುದಾನರಹಿತ ಪ್ರೌಢಶಾಲೆಗಳ ಮುಖ್ಯಸ್ಥರಿಗೆ– ಶಾಲಾ ಲಾಗಿನ್ ಮೂಲಕ